**ನಿರ್ದೇಶಕರ ಕಛೇರಿ**
**ಅಲ್ಪಸಂಖ್ಯಾತರ**
**ನಿರ್ದೇಶನಾಲಯ**

**ಕರ್ನಾಟಕ ಸರ್ಕಾರ**

**ಮೌಲಾನಾ ಅಬುಲ್ ಕಲಾಂ**
**ಆಜಾದ್ ಭವನ**
#16 ಸಿ, ಮಿಲ್ಲರ್ಸ್ ಟ್ಯಾಂಕ್ ಬೆಡ್ ರಸ್ತೆ,
ವಸಂತ ನಗರ, ಬೆಂಗಳೂರು-52
ದೂರವಾಣಿ:080-22864212.
Email:directorgokdom@gmail.com
Web: www.dom.karnataka.gov.in

ಸಂಖ್ಯೆ: ಅ.ಸಂ. ನಿ/ಶಿ.ವಿ/ಪ.ಪೂ/ಸಿ.ಆರ್- 01/2026-27 ದಿನಾಂಕ:23 .04 .2026

ಗೆ,
ಎಲ್ಲಾ ಜಿಲ್ಲೆಗಳ ಜಿಲ್ಲಾ ಅಧಿಕಾರಿಗಳು
ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ

ವಿಷಯ:- ಅಲ್ಪಸಂಖ್ಯಾತರ ನಿರ್ದೇಶನಾಲಯದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧ ವಸತಿ ಪದವಿ ಪೂರ್ವ ಕಾಲೇಜುಗಳು ಹಾಗೂ ಮೌಲಾನಾ ಆಜಾದ್ ಪದವಿ ಪೂರ್ವ ಕಾಲೇಜುಗಳಲ್ಲಿನ 2026-27 ನೇ ಶೈಕ್ಷಣಿಕ ಸಾಲಿನ ಪ್ರಥಮ ಪಿ.ಯು.ಸಿ ತರಗತಿಗೆ ಉಚಿತ ಪ್ರವೇಶಾತಿಗಾಗಿ ಅರ್ಜಿ ಅಹ್ವಾನಿಸುವ ಕುರಿತು.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಅಲ್ಪಸಂಖ್ಯಾತರ ವಿದ್ಯಾರ್ಥಿಗಳ ಶೈಕ್ಷಣಿಕ ಅನುಕೂಲಕ್ಕಾಗಿ ರಾಜ್ಯ ಪಠ್ಯಕ್ರಮದಲ್ಲಿ ಅಲ್ಪಸಂಖ್ಯಾತರ ವಸತಿ ಪದವಿ ಪೂರ್ವ ಕಾಲೇಜುಗಳು / ಮೌಲಾನಾ ಆಜಾದ್ ಪದವಿ ಪೂರ್ವ ಕಾಲೇಜುಗಳು ಅಲ್ಪಸಂಖ್ಯಾತರ ನಿರ್ದೇಶನಾಲಯದ ಅಧೀನದಲ್ಲಿ ಕಾರ್ಯ ನಿರ್ವಹಿಸುತ್ತಿವೆ.

ಸದರಿ ಕಾಲೇಜುಗಳಿಗೆ 2026-27 ಸಾಲಿನಲ್ಲಿ ಕಾಲೇಜುಗಳಿಗೆ ಅಲ್ಪಸಂಖ್ಯಾತರ ಸಮುದಾಯಗಳಾದ ಮುಸ್ಲಿಂ, ಕ್ರೈಸ್ತ, ಸಿಖ್ಖ, ಜೈನ, ಭೌಧ್ಧ ಮತ್ತು ಪಾರ್ಸಿ ಸಮುದಾಯಗಳಿಗೆ ಸೇರಿದ ಹಾಗೂ ಪ.ಜಾತಿ, ಪ.ಪಂಗಡ ಮತ್ತು ಇತರೆ ಹಿಂದುಳಿದ ವರ್ಗಗಳಿಗೆ ಸೇರಿದ ಹತ್ತನೆಯ ತರಗತಿಯ ಅಂತಿಮ ಪರೀಕ್ಷೆ ತೇರ್ಗಡೆಯಾದ ವಿದ್ಯಾರ್ಥಿಗಳು ಪ್ರಥಮ ಪಿ.ಯು.ಸಿ ತರಗತಿಗೆ ಉಚಿತ ಪ್ರವೇಶಾತಿಗಾಗಿ ಆನ್ ಲೈನ್ ಮೂಲಕ ಉಚಿತವಾಗಿ ಅರ್ಜಿ ಸಲ್ಲಿಸಲು ಅರ್ಹರಿರುತ್ತಾರೆ.

ಆದುದರಿಂದ, ಎಲ್ಲಾ ಜಿಲ್ಲೆಗಳ ಜಿಲ್ಲಾ ಅಧಿಕಾರಿಗಳು ತಮ್ಮ ವ್ಯಾಪ್ತಿಯಲ್ಲಿನ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಪದವಿ ಪೂರ್ವ ಕಾಲೇಜುಗಳು / ಇಂಟಿಗ್ರೇಟೆಡ್ (ಉನ್ನತೀಕರಣಗೊಂಡ) ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ/ಪದವಿ ಪೂರ್ವ ಕಾಲೇಜುಗಳು, ಡಾ|| ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆ/ ಪದವಿ ಪೂರ್ವ ಕಾಲೇಜುಗಳು ಮತ್ತು ಸರ್ಕಾರಿ ಮುಸ್ಲಿಂ ವಸತಿ ಶಾಲೆ/ ಪದವಿ ಪೂರ್ವ ಕಾಲೇಜುಗಳು ಹಾಗೂ ಉನ್ನತೀಕರಿಸಿದ ಮೌಲಾನಾ ಆಜಾದ್ ಪದವಿ ಪೂರ್ವ ಕಾಲೇಜುಗಳಲ್ಲಿ ಶೇಕಡಾ 100 ರಷ್ಟು ದಾಖಲಾತಿ ಹೊಂದಲು ವ್ಯಾಪಕ ಪ್ರಚಾರ ಮತ್ತು ಅಗತ್ಯ ಕ್ರಮಗಳನ್ನು ಕೈಗೊಳ್ಳಲು ಈ ಮೂಲಕ ಸೂಚಿಸಿದೆ.

ಅರ್ಜಿ ಸಲ್ಲಿಸುವ ಜಾಲತಾಣದ ವಿಳಾಸ:- ***https://dom.karnataka.gov.in***

**ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ: 24.04.2026**
**ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 16.05.2026**

ಪು.ತಿ.ನೋ

2026-27 ನೇ ಸಾಲಿನ ಪ್ರಥಮ ಪಿ.ಯು.ಸಿ ದಾಖಲಾತಿ ಪ್ರಕ್ರಿಯೆಯ ತಾತ್ಕಾಲಿಕ ವೇಳಾಪಟ್ಟಿ:-

| | |
|---|---|
| ವಿದ್ಯಾರ್ಥಿಗಳಿಂದ ಪ್ರಥಮ ಪಿ.ಯು.ಸಿ ಅರ್ಜಿ ಸಲ್ಲಿಸಲು ಪ್ರಾರಂಭಿಕ ದಿನಾಂಕ | 24.04.2026 |
| ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕ | 16.05.2026 |
| ಸಂಬಂಧಪಟ್ಟ ಕಾಲೇಜುಗಳ ಪ್ರಾಂಶುಪಾಲರು ಅರ್ಜಿಗಳನ್ನು ಪರಿಶೀಲಿಸಲು ಅಂತಿಮ ದಿನಾಂಕ | 19.05.2026 |
| ಸಂಬಂಧಪಟ್ಟ ಜಿಲ್ಲಾ ಅಧಿಕಾರಿಗಳು ಅರ್ಜಿಗಳನ್ನು ಅನುಮೋದಿಸುವ ಅಂತಿಮ ದಿನಾಂಕ | 20.05.2026 |
| ನಿರ್ದೇಶನಾಳಯದಿಂದ ಜಿಲ್ಲಾವಾರು ಮೇರಿಟ್ ಪ್ರಕಟಿಸುವ ದಿನಾಂಕ: | 22.05.2026 |
| ಜಿಲ್ಲಾವಾರು ಮೊದಲ ಸುತ್ತಿನ ಆಯ್ಕೆ ಪಟ್ಟಿ ಪ್ರಕಟಿಸುವ ದಿನಾಂಕ (ಜಿಲ್ಲಾ ಕಛೇರಿಗಳು) | 23.05.2026 |
| ಜಿಲ್ಲಾ ಹಂತದಲ್ಲಿ ಮೊದಲ ಸುತ್ತಿನ ಆಯ್ಕೆ ಪಟ್ಟಿ ಕೌನ್ಸಲಿಂಗ ನಡಸುವ ದಿನಾಂಕ | 26.05.2026 |
| ವಿದ್ಯಾರ್ಥಿಗಳು ಕೌನ್ಸಲಿಂಗ ಮೂಲಕ ಆಯ್ಕೆ ಮಾಡಿಕೊಂಡ ಕಾಲೇಜಿಗೆ ಮೂಲ ದಾಖಲೆಗಳೊಂದಿಗೆ ಪ್ರವೇಶ ಪಡೆಯಲು ಕೊನೆಯ ದಿನಾಂಕ | 30.05.2026 |
| ಜಿಲ್ಲಾ ಹಂತದಲ್ಲಿ ಎರಡನೇ ಸುತ್ತಿನ ಆಯ್ಕೆ ಪಟ್ಟಿ ಪ್ರಕಟಿಸುವ ದಿನಾಂಕ (ಜಿಲ್ಲಾ ಕಛೇರಿಗಳು) | 01.06.2026 |
| ವಿದ್ಯಾರ್ಥಿಗಳು ಕೌನ್ಸಲಿಂಗ ಮೂಲಕ ಆಯ್ಕೆ ಮಾಡಿಕೊಂಡ ಕಾಲೇಜಿಗೆ ಮೂಲ ದಾಖಲೆಗಳೊಂದಿಗೆ ಪ್ರವೇಶ ಪಡೆಯಲು ಕೊನೆಯ ದಿನಾಂಕ | 06.06.2026 |

ವಿಶೇಷ ಸೂಚನೆ: -

1. ನಿರ್ದೇಶನಾಲಯದವತಿಯಿಂದ ಹೊರಡಿಸಲಾಗಿರುವ ಪ್ರಥಮ ಪಿ.ಯು.ಸಿ ತರಗತಿ ಮಾರ್ಗಸೂಚಿಯನ್ನು ಕಡ್ಡಾಯವಾಗಿ ನಿರ್ವಹಿಸುವುದು.
2. ಪದವಿ ಪೂರ್ವ ಶಿಕ್ಷಣ ಇಲಾಖೆಯು ಹೊರಡಿಸಿರುವ 2026-27 ನೇ ಸಾಲಿನ ಶೈಕ್ಷಣಿಕ ಮಾರ್ಗಸೂಚಿಯಂತೆ ನಿಯಮಾನುಸಾರ ದಾಖಲಾತಿಯನ್ನು ಕೈಗೊಳ್ಳುವುದು.

ನಿರ್ದೇಶಕರು
ಅಲ್ಪಸಂಖ್ಯಾತರ ನಿರ್ದೇಶನಾಲಯ
ಬೆಂಗಳೂರು

ಪ್ರತಿಯನ್ನು:

1. ಎಲ್ಲಾ ಪ್ರಾಂಶುಪಾಲರು ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ಬಾಲಕಿಯರ ಪದವಿಪೂರ್ವ ವಸತಿ ಕಾಲೇಜುಗಳು ಇವರ ಸೂಕ್ತ ಕ್ರಮಕ್ಕಾಗಿ.
2. ಎಲ್ಲಾ ಪ್ರಾಂಶುಪಾಲರು ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ಉನ್ನತೀಕರಿಸಿದ ಪದವಿಪೂರ್ವ ವಸತಿ ಕಾಲೇಜುಗಳು ಇವರ ಸೂಕ್ತ ಕ್ರಮಕ್ಕಾಗಿ.
3. ಎಲ್ಲಾ ಮುಖ್ಯೋಪಾಧ್ಯಾಯರುಗಳು ಮೌಲಾನಾ ಆಜಾದ್ ಪದವಿ ಪೂರ್ವ ಕಾಲೇಜುಗಳು ಇವರ ಸೂಕ್ತ ಕ್ರಮಕ್ಕಾಗಿ.